ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 620 |
| ಮಾನ್ಯ ಸದಸ್ಯರ ಹೆಸರು | ಶ್ರೀ ಸುನಿಲ್ ವಲ್ಯಾಪುರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 11.12.2023 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಆರೋಗ್ಯ ಇಲಾಖೆಯಲ್ಲಿ ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶುಶ್ರೂಷಕರುಗಳು ಹಾಗೂ ಗೌರವಧನ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಆಶಾ ಕಾರ್ಯಕರ್ತೆಯವರು ಖಾಯಂಗೊಳಿಸಲು ಹೋರಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು; ಇವರನ್ನು ಯಾವಾಗ ಖಾಯಂಗೊಳಿಸಲಾಗುವುದು; (ಮಾಹಿತಿ ನೀಡಿರುವುದು) | ಬಂದಿದೆ.<br><br>ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶುಶ್ರೂಷಕರುಗಳನ್ನು ಅಭಿಯಾನದ ಅನುಷ್ಠಾನಕ್ಕೆ ಪಡೆದಿದ್ದು, ಅಭಿಯಾನ ಮುಕ್ತಾಯವಾದರೆ ಇವರ ನೇಮಕಾತಿಯು ಮುಕ್ತಾಯಗೊಳ್ಳುವ ಹಿನ್ನೆಲೆಯಲ್ಲಿ ಇವರುಗಳನ್ನು ಜಾರಿಯಲ್ಲಿರುವ ಸೇವಾ ನಿಯಮಗಳಂತೆ ಖಾಯಂಗೊಳಿಸಲು ಅವಕಾಶವಿರುವುದಿಲ್ಲ. |
| ಆ | ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡ ವೈದ್ಯರು ಸೇರಿದಂತೆ ಇತರೆ ಅಧಿಕಾರಿ ನೌಕರರನ್ನು ಈಗಾಗಲೇ ಖಾಯಂಗೊಳಿಸಲಾಗಿದ್ದು, ಶುಶ್ರೂಷಕರುಗಳು ಹಾಗೂ ಆಶಾ ಕಾರ್ಯಕರ್ತೆಯರನ್ನು ಖಾಯಂಗೊಳಿಸದಿರುವುದಕ್ಕೆ ಕಾರಣವೇನು; ಇವರುಗಳನ್ನು ಖಾಯಂಗೊಳಿಸಲು ಸರ್ಕಾರದ ಹಂತದಲ್ಲಿ ಚಿಂತನೆ ಇದೆಯೇ;<br>(ಮಾಹಿತಿ ನೀಡುವುದು) | ಆಶಾ ಕಾರ್ಯಕರ್ತೆಯರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಖಾಯಂ/ ಗುತ್ತಿಗೆ/ ಹೊರಗುತ್ತಿಗೆಯ ನೌಕರರಾಗಿರುವುದಿಲ್ಲ. ಆಶಾ ಕಾರ್ಯಕರ್ತೆಯರ ಕಾರ್ಯ ಚಟುವಟಿಕೆಗಳು ಸಂಪೂರ್ಣವಾಗಿ ಅರೆಕಾಲಿಕವಾಗಿದ್ದು, ಪೂರ್ಣಕಾಲಿಕ ಸ್ವರೂಪದಲ್ಲಿರುವುದಿಲ್ಲ. ಇವರಿಗೆ ನೀಡುವ ಗೌರವಧನ/ ಪ್ರೋತ್ಸಾಹಧನವು ಸಂಪೂರ್ಣವಾಗಿ ಕಾರ್ಯನಿರ್ವಹಣೆಗೆ ಒಳಪಟ್ಟಿರುತ್ತದೆ. ಇವರ ಸೇವೆಯು ಸ್ವಯಂ ಪ್ರೇರಿತ ನೆಲೆಗಟ್ಟಿನಲ್ಲಿರುವುದರಿಂದ ಆಶಾ ಕಾರ್ಯಕರ್ತೆಯರನ್ನು ಖಾಯಂ ಮಾಡಲು ಸಾಧ್ಯವಿರುವುದಿಲ್ಲ. |

...2

Scanned with OKEN Scanner

| | | |
|---|---|---|
| ಇ | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶುಶ್ರೂಷಕರುಗಳಿಗೆ ಸಮಾನ ಕೆಲಸಕ್ಕೆ ಸಮಾನ ವೇತನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದಲ್ಲಿ,ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು: (ಮಾಹಿತಿ ನೀಡುವುದು) | ಬಂದಿದೆ.<br>1.ರಾಷ್ಟ್ರೀಯ ಆರೋಗ್ಯ ಅಭಿಯಾನವು ಕೇಂದ್ರ ಸರ್ಕಾರದ ಪುರಸ್ಕೃತ ಯೋಜನೆಯಾಗಿದ್ದು, ಯೋಜನೆ ಜಾರಿಯಲ್ಲಿರುವವರೆಗೆ ಉದ್ಯೋಗ ನೀಡಲಾಗಿದ್ದು, ಕಾರ್ಯಕ್ರಮ ಮುಕ್ತಾಯ ನಂತರ ಉದ್ಯೋಗ ಕೊನೆಗೊಳ್ಳುತ್ತದೆ. ಉದ್ಯೋಗವು ತಾತ್ಕಾಲಿಕವಾಗಿದೆ.<br>2. ರಾಷ್ಟ್ರೀಯ ಆರೋಗ್ಯ ಅಭಿಯಾನವು ಆರೋಗ್ಯ ಇಲಾಖೆಯ ಪೂರಕ ಕಾರ್ಯಕ್ರಮವಾಗಿದ್ದು, ಭಾರತ ಸರ್ಕಾರದ ಆರ್.ಓ.ಪಿ. (ರೆಕಾರ್ಡ್ ಆಫ್ ಪ್ರೋಸಿಡಿಂಗ್ಸ್) ಯಲ್ಲಿ ಅನುಮೋದನೆಯಾದ ಮಾಸಿಕ ವೇತನ ನೀಡಲಾಗುತ್ತಿದೆ.<br>3. 2022-23 ಸಾಲಿನಿಂದ Minimum Wages Act/Labour ರಡಿಯಲ್ಲಿ ವೇತನ ನೀಡಲಾಗುತ್ತಿದೆ.<br>4. ಆರ್. ಓ.ಪಿ. ಅನುಮೋದನೆಯಂತೆ ರಾ.ಆ.ಅ ಅಡಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ಪ್ರತಿ ವರ್ಷ ಶೇ: 5 ರಷ್ಟು ವಾರ್ಷಿಕ ಹೆಚ್ಚುವರಿ ಆಗಿ ಪರಿಗಣಿಸಿ ವೇತನ ನೀಡಲಾಗುತ್ತಿದೆ. 3-5 ವರ್ಷಗಳ ಸೇವೆಯನ್ನು ಪೂರ್ಣಗೊಳಿಸಿದ ಗುತ್ತಿಗೆ ಆಧಾರದಲ್ಲಿ ನೇಮಕಗೊಂಡ ಸಿಬ್ಬಂದಿಗಳಿಗೆ 3 ವರ್ಷಕ್ಕೆ ಶೇ: 10 ಮತ್ತು 5 ವರ್ಷಕ್ಕೆ ಶೇ : 5 ಅನುಭವ ಬೋನಸ್ (Experience/Loyalty Bonus) ನೀಡಲಾಗುತ್ತಿದೆ..<br>5. ಕರ್ನಾಟಕ ಸರ್ಕಾರವು ಹೊರಡಿಸಿರುವ ಆದೇಶದಂತೆ ವೇತನಕ್ಕೆ ಹೆಚ್ಚುವರಿಯಾಗಿ ಶೇ: 15 ರಷ್ಟು ಹೆಚ್ಚಳವನ್ನು ಮಂಜೂರು ಮಾಡಿದೆ. |
| ಈ | ಕಲಬುರಗಿಯ ಗುಲಬರ್ಗಾ ವೈದ್ಯಕೀಯ ವಿಜ್ಞಾನ ಸಂಸ್ಥೆ ಆಸ್ಪತ್ರೆಯಲ್ಲಿ ಇರುವ ಡಯಾಲಿಸಿಸ್ ಕೇಂದ್ರದಲ್ಲಿ ತಜ್ಞ ವೈದ್ಯರು ಮತ್ತು ಅಗತ್ಯ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದಲ್ಲಿ ಈ ಕುರಿತು ಕೈಗೊಂಡ ಕ್ರಮವೇನು? | ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ MOU ಪ್ರಕಾರ ತಾಂತ್ರಿಕ ತಜ್ಞ ಸಿಬ್ಬಂದಿಗಳನ್ನು ಹೊರಗುತ್ತಿಗೆ ಮುಖಾಂತರ ಡಯಾಲಿಸಿಸ್ ಟೆಂಡರ್‌ದಾರರು ನೇಮಕ ಮಾಡಿಕೊಂಡಿರುತ್ತಾರೆ.<br><br>ಸರ್ಕಾರದ ಹಂತದಲ್ಲಿ ಯಾವುದೇ ಡಯಾಲಿಸಿಸ್ ತಾಂತ್ರಿಕ ತಜ್ಞ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವ ಪ್ರಸ್ತಾವನೆ ಇರುವುದಿಲ್ಲ. |

ಸಂಖ್ಯೆ: ಆಕುಕ/620/ಚುರ/2023

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

Scanned with OKEN Scanner